ತೊಂದರೆಯೂ ಇದೆ. ಅಲ್ಲಿ ಕೆಲಸ ಮಾಡುತ್ತಿರುವವರು ರೈತರಿಂದ ಹೆಚ್ಚಿನ ಹಣವನ್ನು ವಸೂಲಿ ಮಾಡುವ ಕಾರ್ಯಕ್ರಮವನ್ನು ಮಾತ್ರ ಮಾಡುತ್ತಿದ್ದಾರೆ. ಗೋಕಾಕ್ ತಾಲ್ಲೂಕಿನಲ್ಲಿ ಸುಸಜ್ಜಿತವಾದ ಪಶುವೈದ್ಯಶಾಲೆ ಇರಬೇಕು. ಮತ್ತೆ ಅಲ್ಲಿ ಹುಲ್ಲುಗಾವಲಿಗೆ ಅವಕಾಶ ಮಾಡಿಕೊಡಬೇಕಾದ ಅವಶ್ಯಕತೆ ಇದೆ. ಮಹಾರಾಷ್ಟ್ರ ಸರ್ಕಾರದಲ್ಲಿ ಈ ಬಗ್ಗೆ ಉತ್ತಮವಾದ ಕಾರ್ಯ ನಡೆಯುತ್ತಿರುವುದರಿಂದ ಮಾನ್ಯ ಮಂತ್ರಿಗಳು ಅದನ್ನು ಅಭ್ಯಸಿಸಿ ನವಂಗೂ ಅನುಕೂಲ ಮಾಡಿಕೊಡಬೇಕೆಂದು ಕೇಳಿಕೊಳ್ಳುತ್ತೇನೆ.

ಶ್ರೀ ವಿಶ್ವನಾಥರೆಡ್ಡಿ ಮುದ್ನಾಳ್.—ಗ್ರಾಮಾಂತರ ಪ್ರದೇಶಗಳಲ್ಲಿ ಪಶುವೈದ್ಯಶಾಲೆಗಳನ್ನು ತೆರೆಯುವ ಬಗ್ಗೆ ಮಾನ್ಯ ಸದಸ್ಯರು ಏನು ಸಲಹೆ ಕೊಟ್ಟಿದ್ದಾರೋ ಅದನ್ನು ಪರಿಶೀಲನೆ ಮಾಡುತ್ತೇನೆ. ಮಂತ್ರು ಅಧಿಕಾರಿಗಳು ಔಷಧಿಗೆ ಹಣವನ್ನು ತೆಗೆದುಕೊಳ್ಳುತ್ತಿದ್ದಾರೆ ಎಂಬ ಸೂಚನೆಯನ್ನು ಕೊಟ್ಟಿದ್ದಾರೆ. ನಿರ್ದಿಷ್ಟವಾದ ಯಾವುದಾದರೂ ಪ್ರಕರಣವನ್ನು ನಮ್ಮ ಗಮನಕ್ಕೆ ತಂದರೆ ಆ ಬಗ್ಗೆ ಪರಿಶೀಲಿಸಲಾಗುವುದು.

ಶ್ರೀ ಎಂ. ಎಲ್. ಮುತ್ತಣ್ಣವರ್.—ಗೋಕಾಕ್ ತಾಲ್ಲೂಕು ಗುಡ್ಡಗಾಡು ಪ್ರದೇಶವಾಗಿರುವುದರಿಂದ ಜನರಿಗೆ ಹೆಚ್ಚು ಅನುಕೂಲತೆ ಇಲ್ಲ. ಇದರ ಬಗ್ಗೆ ಯೋಚನೆ ಮಾಡಿ ಹಿಂದುಳಿದವರಿಗೆ ಹೆಚ್ಚಿನ ರಿಯಾಯಿತಿ ಮತ್ತು ಅನುಕೂಲಗಳನ್ನು ಮಾಡಿಕೊಡಬೇಕೆಂದು ವಿನಂತಿ ಮಾಡಿಕೊಳ್ಳುತ್ತೇನೆ.

ಶ್ರೀ ವಿಶ್ವನಾಥರೆಡ್ಡಿ ಮುದ್ನಾಳ್.—ಈ ಬಗ್ಗೆ ವಿವರವಾದ ಸೂಚನೆಯನ್ನು ಕಳುಹಿಸಿದರೆ ಪರಿಶೀಲಿಸಲಾಗುವುದು.

ಇಂಜಿನೀಯರಿಂಗ್ ಡಿಪ್ಲೊಮೋ ವಿದ್ಯಾರ್ಥಿಗಳಿಗೆ ವ್ಯಾಸಂಗದ ಅವಧಿಯನ್ನು ಕಡಿಮೆ ಮಾಡುವ ಬಗ್ಗೆ

೨೦೯. ಶ್ರೀ ವೈ. ಕೆ. ರಾಮಯ್ಯ (ಕುಣಿಗಲ್).—ಮಾನ್ಯ ವಿದ್ಯಾಮಂತ್ರಿಗಳು ಈ ಕೆಳಗೆ ಕಂಡ ಪ್ರಶ್ನೆಗಳನ್ನು ಉತ್ತರಿಸುವರೇ ?

(ಅ) ತುಮಕೂರು ಶ್ರೀ ಸಿದ್ಧಗಂಗಾ ತಾಂತ್ರಿಕ ಶಿಕ್ಷಣ ಕಾಲೇಜಿನಲ್ಲಿ ಬಿ.ಇ. ಒಂದನೇ ವರ್ಷದ ತರಗತಿಯಲ್ಲಿ ಓದುತ್ತಿರುವ ಡಿಪ್ಲೊಮೊ ವಿದ್ಯಾರ್ಥಿಗಳು ಒಂದು ವರ್ಷದ ವ್ಯಾಸಂಗದ ಅವಧಿಯನ್ನು ೧೯೬೦-೬೧ನೇ ಸಾಲಿನಲ್ಲಿ ಜಾರಿ ಇದ್ದಂತೆ ಕಡಿಮೆ ಮಾಡಬೇಕೇ ಅಥವಾ ವಿಷಯಗಳಲ್ಲಿ ವಿನಾಯಿತಿ ನೀಡಬೇಕೆ ಎಂದು ಸರ್ಕಾರ ಆದೇಶ ಕೋರಿ ಸರ್ಕಾರಕ್ಕೆ ಎಷ್ಟು ಅರ್ಜಿಗಳನ್ನು ಅಥವಾ ವಿಜ್ಞಾಪನಾ ಪತ್ರಗಳನ್ನು ೧೯೬೦ನೇ ಸಾಲಿನಿಂದ ಕೊಟ್ಟಿದ್ದಾರೆ ;

(ಆ) ಮೇಲ್ಕಂಡ ವಿಷಯದ ಬಗ್ಗೆ ಬೆಂಗಳೂರು ವಿಶ್ವವಿದ್ಯಾನಿಲಯಕ್ಕೆ ಎಷ್ಟು ಅರ್ಜಿಗಳನ್ನು ಈ ಬಗ್ಗೆ ೧೯೬೦ನೇ ಸಾಲಿನಿಂದ ಕೊಡಲಾಗಿದೆ ;

(ಇ) ಮೇಲ್ಕಂಡ ವಿಷಯದ ಬಗ್ಗೆ ಬೆಂಗಳೂರಿನ ವಿಶ್ವವಿದ್ಯಾನಿಲಯವು ಹಾಗೂ ಸರ್ಕಾರ ಏನು ತೀರ್ಮಾನ ಕೈಗೊಂಡಿದ್ದಾರೆ ;

(ಈ) ಹಾಗಿಲ್ಲದಿದ್ದಲ್ಲಿ ಅದಕ್ಕೆ ಕಾರಣವೇನು ? ನಿರ್ಧಾರ ತೆಗೆದುಕೊಂಡಿದ್ದರೆ ಆ ನಿರ್ಧಾರವನ್ನು ತುಮಕೂರು ಸಿದ್ಧಗಂಗಾ ಇಂಜಿನಿಯರಿಂಗ್ ಕಾಲೇಜಿಗೆ ಕಳುಹಿಸಲಾಗಿದೆಯೇ ?

ಶ್ರೀ ಬಿ. ರಾಚಯ್ಯ (ಮಾನ್ಯ ಶಿಕ್ಷಣ ಮಂತ್ರಿಗಳು).—

(ಅ) ತುಮಕೂರು ಶ್ರೀ ಸಿದ್ಧಗಂಗಾ ತಾಂತ್ರಿಕ ಶಿಕ್ಷಣ ಕಾಲೇಜು ಖಾಸಗೀ ಕಾಲೇಜಾಗಿ ಈ ವಿಷಯವು ಬೆಂಗಳೂರು ವಿಶ್ವವಿದ್ಯಾನಿಲಯದ ವ್ಯಾಪ್ತಿಗೆ ಒಳಪಟ್ಟಿರುತ್ತದೆ. ಆದರೂ ಈ ವಿಷಯಕ್ಕಾಗಿ ಸಿದ್ಧಗಂಗಾ ಇನ್‌ಸ್ಟಿಟ್ಯೂಟ್‌ನ ಅಭ್ಯರ್ಥಿಗಳು ಸಲ್ಲಿಸಿದ್ದ ಅರ್ಜಿಯನ್ನು ದಿನಾಂಕ ೧೬ನೇ ಫೆಬ್ರುವರಿ ೧೯೬೩ರಲ್ಲಿ ಮುಂದಿನ ಕ್ರಮಕ್ಕಾಗಿ ಬೆಂಗಳೂರು ವಿಶ್ವವಿದ್ಯಾನಿಲಯದ ಕುಲಪತಿಯವರಿಗೆ ಕಳುಹಿಸಿದೆ.

(ಆ) ವಿಶ್ವವಿದ್ಯಾನಿಲಯಕ್ಕೆ ಈ ವಿಷಯ ಸಂಬಂಧಪಟ್ಟಿದ್ದು.

(ಇ) ಇನ್ನೂ ನಿರ್ಧಾರವನ್ನು ಕೈಗೊಂಡಂತೆ ಕಾಣಲಿಲ್ಲ.

(ಈ) ಸಧ್ಯಕ್ಕೆ ಸರ್ಕಾರದಲ್ಲಿ ಏನಾಯಿತೆಂದು ಹೇಳಿ ಮಾಹಿತಿಯಿಲ್ಲ.

ಶ್ರೀ ವೈ. ಕೆ. ರಾಮಯ್ಯ.—ವಿಶ್ವವಿದ್ಯಾನಿಲಯದವರು ಈ ವಿದ್ಯಾರ್ಥಿಗಳ ಕಷ್ಟ ಸುಖಗಳನ್ನು ಪರಿಗಣಿಸಿ ಕ್ರಮ ಕೈಗೊಳ್ಳದೇ ಇದ್ದರೆ ಸರ್ಕಾರ ಇದರಲ್ಲಿ ಇಂಟರ್‌ಫಿಯರ್ ಆಗಿ ವಿದ್ಯಾರ್ಥಿಗಳಿಗೆ ಸಹಾಯ ಮಾಡುವುದಕ್ಕೆ ಆಗುವುದಿಲ್ಲವೇ ?

ಶ್ರೀ ಬಿ. ರಾಚಯ್ಯ.—ವಿಶ್ವವಿದ್ಯಾನಿಲಯದ ಸ್ಯಾಟ್ಯೂಟ್ ಪ್ರಕಾರ ಈ ವಿಷಯ ಅಕ್ಯಾಡಮಿಕ್ ಕೌನ್ಸಿಲ್‌ಗೆ ಸಂಬಂಧಪಟ್ಟಿದಾಗಿದೆ ವಿಶ್ವವಿದ್ಯಾನಿಲಯದ ಉಪಕುಲಪತಿಗಳು ಈ ವಿಷಯವನ್ನು ಅಕ್ಯಾಡಮಿಕ್ ಕೌನ್ಸಿಲ್ ಮುಂದೆ ಇಟ್ಟು ಅವರ ಅಭಿಪ್ರಾಯವನ್ನು ಪಡೆದು ಆ ನಂತರ ತೀರ್ಮಾನ ತೆಗೆದುಕೊಳ್ಳಬೇಕಾಗುತ್ತದೆ. ಈ ವಿಷಯವನ್ನು ಆದಷ್ಟು ಬೇಗ ಪರ್ಯಾಲೋಚಿಸಿ ಎಂದು ಸರ್ಕಾರ ಅವರಿಗೆ ಹೇಳುವುದಕ್ಕೆ ಬರುತ್ತದೆ.

ಶ್ರೀ ವೈ. ಕೆ. ರಾಮಯ್ಯ.—ಇಂತಹ ಸಮಸ್ಯೆ ಬರೀ ತುಮಕೂರಿಗೇ ಸೀಮಿತವಾಗಿದೆಯೋ ಅಥವಾ ಬೇರೆ ಕಾಲೇಜುಗಳಲ್ಲೂ ಇದೆಯೋ ?

ಶ್ರೀ ಬಿ. ರಾಚಯ್ಯ.—ಈ ಪಾಲಿಟೆಕ್ನಿಕ್‌ನಲ್ಲಿ ಡಿಪ್ಲೊಮಾ ಓದುತ್ತಿರತಕ್ಕ ವಿದ್ಯಾರ್ಥಿಗಳಿಗೆ ಎಂಜಿನಿಯರಿಂಗ್ ಕಾಲೇಜಿನಲ್ಲಿ ಶೇಕಡಾ ೫೫ ರಷ್ಟು ಮಿಸಲಾತಿಯನ್ನು ಇಡಬೇಕೆಂದು ಸರ್ಕಾರ ತೀರ್ಮಾನ ತೆಗೆದುಕೊಂಡಮೇಲೆ ಇದಕ್ಕೆ ಎಲ್ಲಾ ವಿಶ್ವವಿದ್ಯಾನಿಲಯಗಳಲ್ಲೂ ಕೂಡ ಏಕರೂಪವಾದ ಒಂದು ತೀರ್ಮಾನಕ್ಕೆ ಬರಬೇಕಾಗುತ್ತದೆ. ಆದುದರಿಂದ ವಿಶ್ವವಿದ್ಯಾನಿಲಯಗಳ ಉಪಕುಲಪತಿಗಳ ಒಂದು ಸಭೆ ಕರೆದು ಅದರಲ್ಲಿ ಈ ವಿಷಯವನ್ನು ತೀರ್ಮಾನ ಮಾಡಬೇಕೆಂದು ನಾನು ನಿರ್ಧಾರ ಮಾಡಿದ್ದೇನೆ.

ಶ್ರೀ ವೈ. ಕೆ. ರಾಮಯ್ಯ.—ಈಗ ಅಕ್ಯಾಡಮಿಕ್ ಇಯರ್ ಪ್ರಾರಂಭವಾಗುತ್ತಿರುವುದರಿಂದ ಈ ವಿಷಯವನ್ನು ಪೋಸ್ಟ್‌ಪೋನ್ ಮಾಡುವುದು ಸರಿಯಲ್ಲ. ಇದರಿಂದ ವಿದ್ಯಾರ್ಥಿಗಳಿಗೆ ಒಂದು ವರ್ಷದ ವಿದ್ಯಾಬ್ಯಾಸಕ್ಕೆ ತೊಂದರೆಯಾಗುತ್ತದೆ ಆದ್ದರಿಂದ ಮಾನ್ಯ ಮಂತ್ರಿಗಳು ಮಂತ್ರಿಗಳಾಗದೇ ವಿದ್ಯಾಭಿಮಾನಿಯಾಗಿ ಆದಷ್ಟು ಬೇಗ ತೀರ್ಮಾನ ತೆಗೆದುಕೊಳ್ಳುತ್ತೀರಾ ? ಈ ಬಗ್ಗೆ ವಿಶ್ವವಿದ್ಯಾನಿಲಯದವರು ಏನಾದರೂ ಕಾರ್ಯಕ್ರಮ ಹಾಕಿಕೊಳ್ಳುವ ಬಗ್ಗೆ ನಿರ್ದೇಶಿಸುತ್ತೀರಾ ?

ಶ್ರೀ ಬಿ. ರಾಚಯ್ಯ.—ನಾವು ಅವರಿಗೆ ನಿರ್ದೇಶನ ಕೊಡುವುದಕ್ಕೆ ಸಾಧ್ಯವಾಗುತ್ತದೆ. ಆದರೂ ಕೂಡಾ ಈಗಿನ ಆಕ್ಟ್ ಪ್ರಕಾರ ಕೊನೆಯಲ್ಲಿ ಆಗುವುದಿಲ್ಲವೆಂದು ಹೇಳಿದಾಗ ಅವರ ಮೇಲೆ ಇದನ್ನು ಹೊರಿಸುವುದಕ್ಕಾಗುವುದಿಲ್ಲ. ಬೈ ಪಾಸ್ ಆಪರೇಷನ್ ಅವರ ಹತ್ತಿರ ಕುಳಿತುಕೊಂಡು ಚರ್ಚೆ ಮಾಡಿ ಏಕರೂಪದ ಒಂದು ನಿರ್ಧಾರವನ್ನು ನಾವು ತೆಗೆದುಕೊಳ್ಳಲು, ವಿಶ್ವವಿದ್ಯಾನಿಲಯಗಳ ಉಪಕುಲಪತಿಗಳ ಒಂದು ಸಭೆ ಸೇರಿಸಿ ನಾನು ಹೇಳಬೇಕೆಂದಿದ್ದೇನೆಂದು ಆಗಲೇ ಹೇಳಿದ್ದೇನೆ.

ಕುಲ್ಬರ್ಗಿ ನಗರದ ಬ್ರಹ್ಮಪುರ ಪ್ರಾಥಮಿಕ ಶಾಲೆ ಕಟ್ಟಡದ ಬಗ್ಗೆ

೨೧೧. ಶ್ರೀ ಎಸ್. ಕೆ. ಕಾಂತ (ಗುಲ್ಬರ್ಗ).—ಮಾನ್ಯ ವಿದ್ಯಾಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೇ ?

ಕಲಬುರ್ಗಿ ನಗರದಲ್ಲಿ ಬ್ರಹ್ಮಪುರ ಪ್ರಾಥಮಿಕ ಶಾಲೆ ಕಟ್ಟಡ ಅರ್ಧ ಬಿದ್ದಿದ್ದು, ಅದರಲ್ಲಿ ಬೆಂಚು ಕೂಡ ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ ?

ಶ್ರೀ ಬಿ. ರಾಚಯ್ಯ.—(ಶಿಕ್ಷಣ ಮಂತ್ರಿಗಳು).—

ಬಾಡಿಗೆ ಕಟ್ಟಡದಲ್ಲಿ ನಡೆಯುತ್ತಿದ್ದ ಈ ಶಾಲೆಯು ಎರಡು ಕೊಠಡಿಗಳು ಬಿದ್ದಿವೆ. ಇವುಗಳನ್ನು ೮೫-೮೪ರಲ್ಲಿ ಆವ್ಯತೆಯ ಮೇಲೆ ದುರಸ್ತಿ ಮಾಡಿಸಲಾಗುವುದು ಬೆಂಚುಗಳನ್ನು ಹಂತ ಹಂತವಾಗಿ ಒದಗಿಸಲಾಗುವುದು.